ಸಿಸಿ ಕ್ಯಾಮರಾಗಳನ್ನು ಅಳವಡಿಸುವುದು

2000 (3211); ಶ್ರೀ ಅಪ್ಪಚ್ಚು ರಂಜನ್. ಎಂ.ಪಿ. (ಮಡಿಕೇರಿ)

ಅ) ರಾಜ್ಯದಲ್ಲಿ ಎಷ್ಟು ಸಬ್ ರಿಜಿಸ್ಟ್ರಾರ್ ಕಛೇರಿಯಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ;

ಆ) ಎಷ್ಟು ಸಬ್ ರಿಜಿಸ್ಟ್ರಾರ್ ಕಛೇರಿಯಲ್ಲಿ ಸಿಸಿ ಕ್ಯಾಮರಾ ಅಳವಡಿಸಲು ಬಾಕಿ ಇದೆ;

ಇ) ಯಾವಾಗ ಅಳವಡಿಸಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಬೆಳಗಾವಿಯ ಉಪನೋಂದಣಿ ಕಛೇರಿಯಲ್ಲಿ ಹಾಗೂ ಟಿ. ನರಸೀಪುರ ಉಪನೋಂದಣಿ ಕಛೇರಿಯಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿದೆ.

ಆ) ಮೇಲ್ಕಂಡ ಕಚೇರಿಗಳನ್ನು ಹೊರತುಪಡಿಸಿ ರಾಜ್ಯದ ಉಳಿದ ಉಪನೋಂದಣಿ ಕಛೇರಿಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಿರುವುದಿಲ್ಲ.

ಇ) ರಾಜ್ಯದ ಎಲ್ಲಾ ಉಪ ನೋಂದಣಿ ಕಛೇರಿಗಳಲ್ಲಿ ಸಿಸಿಟಿವಿ ಅಳವಡಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಉಪ–ವಿಭಾಗಾಧಿಕಾರಿಗಳ ಕಛೇರಿ

2001 (2400); ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ಪಟ್ಟಣಕ್ಕೆ ಉಪ–ವಿಭಾಗಾಧಿಕಾರಿಗಳ ಕಛೇರಿಯನ್ನು (ಎ.ಸಿ. ಆಫೀಸ್) ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಈ ಕಛೇರಿಗಾಗಿ ಈಗಾಗಲೇ ಮಿನಿ ವಿಧಾನಸೌಧದಲ್ಲಿ ಸ್ಥಳ ಕಾಯ್ದಿರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಕಛೇರಿ ಸ್ಥಾಪನೆಯಿಂದ ತಾಳಿಕೋಟೆ, ಬಸವನ ಬಾಗೇವಾಡಿ ಮತ್ತು ಸಿಂದಗಿ ತಾಲ್ಲೂಕಿನ ಸಾರ್ವಜನಿಕರಿಗೆ ಅನುಕೂಲವಾಗಲಿರುವ ಕಾರಣದಿಂದ ಸದರಿ ಕಛೇರಿ ಸ್ಥಾಪಿಸಬೇಕೆಂಬ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

ಈ) ಹಾಗಿದ್ದಲ್ಲಿ, ಯಾವಾಗಿನಿಂದ ಕಛೇರಿಯನ್ನು ಸ್ಥಾಪಿಸಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) **ಇಂದ ಈ)** ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ಅಥವಾ ಮುದ್ದೇಬಿಹಾಳವನ್ನು ಕಂದಾಯ ಉಪವಿಭಾಗವೆಂದು ರಚಿಸುವುದಕ್ಕೆ ಸಂಬಂಧಿಸಿದಂತೆ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಇವರಿಂದ ಕೋರಿಕೆಯು ಸ್ವೀಕೃತವಾಗಿರುತ್ತದೆ.

ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಅಥವಾ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಹೊಸ ತಾಲ್ಲೂಕುಗಳು ರಚನೆಯಾದ ನಂತರ ಉಪ ವಿಭಾಗೀಯ ಕಛೇರಿಯನ್ನು ಪ್ರಾರಂಭಿಸಬಹುದಾಗಿದೆಯೆಂದು ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಇವರು ಅಭಿಪ್ರಾಯವನ್ನು ವ್ಯಕ್ತ ಪಡಿಸಿರುತ್ತಾರೆ.

ಅದರಂತೆಯೇ ಹೊಸ ತಾಲ್ಲೂಕುಗಳನ್ನು ರಚಿಸಿದ ನಂತರ ಬಸವನ ಬಾಗೇವಾಡಿ ಅಥವಾ ಮುದ್ದೇಬಿಹಾಳವನ್ನು ಕಂದಾಯ ಉಪ ವಿಭಾಗವೆಂದು ರಚಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುವುದು.